# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 464 (508)

ಉತ್ತರಿಸಬೇಕಾದ ದಿನಾಂಕ : 14.08.2025

ಸದಸ್ಯರ ಹೆಸರು ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು )

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು.

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಬೆಳಗಾವಿ ನಗರದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ-48 ಪಕ್ಕದಲ್ಲಿ ಹೊಸ ಜಿಲ್ಲಾ ಮಟ್ಟದ ಕ್ರೀಡಾಂಗಣವನ್ನು ನಿರ್ಮಿಸಲು ಸರ್ಕಾರದ ವತಿಯಿಂದ ಯೋಜಿಸಿದ್ದು, ಸದರಿ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆಯೇ; ಇದ್ದಲ್ಲಿ, ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ಯಾವಾಗ ಪೂರ್ಣಗೊಳಿಸಲಾಗುವುದು; | ನೂತನ ಬೆಳಗಾವಿ ಜಿಲ್ಲಾ ಕ್ರೀಡಾಂಗಣವನ್ನು ನಿರ್ಮಿಸಲು ಲೋಕೋಪಯೋಗಿ ಇಲಾಖೆಯು ರೂ.10.00 ಕೋಟಿಗಳನ್ನು ಹಂಚಿಕೆ ಮಾಡಿಕೊಂಡಿದ್ದು, ಮೊದಲ ಹಂತದ ಕಾಮಗಾರಿಗೆ ದಿನಾಂಕ: 06-06-2024 ರಂದು ಟೆಂಡರ್ ಆಹ್ವಾನಿಸಲಾಗಿದ್ದು, ಕಾಮಗಾರಿಯನ್ನು ದಿನಾಂಕ:30-09-2024 ರಂದು ಪ್ರಾರಂಭಿಸಲಾಗಿರುತ್ತದೆ. ಟೆಂಡರ್ ನಿಯಮಾನುಸಾರಸದರಿ ಕಾಮಗಾರಿಯನ್ನು 11ತಿಂಗಳ ಅವಧಿಯೊಳಗಾಗಿ ಪೂರ್ಣಗೊಳಿಸಬೇಕಾಗಿದೆ.<br><br>ಲೋಕೋಪಯೋಗಿ ಇಲಾಖೆಯವರು ನೆಲಸಮತಟ್ಟು, ನಿವೇಶನದ ಮಧ್ಯದಲ್ಲಿರುವ ನಾಲಾಕ್ಕೆ ಆರ್.ಸಿ.ಸಿ. ಚರಂಡಿ ನಿರ್ಮಾಣ, ಕ್ರೀಡಾಂಗಣದ ಬದಿಯಲ್ಲಿ ರಿಟೈನಿಂಗ್ ವಾಲ್ ನಿರ್ಮಿಸುವ ಕಾಮಗಾರಿಗಳನ್ನು ಹಾಗೂ ನಿವೇಶನದ ಮಧ್ಯಭಾಗದಲ್ಲಿದ್ದ ದೇವಸ್ಥಾನವನ್ನು ಸ್ಥಳಾಂತರಿಸಿ ಮರು ನಿರ್ಮಾಣ ಮಾಡುವ ಕಾಮಗಾರಿಯು ಪ್ರಸ್ತುತ ಪ್ರಗತಿಯಲ್ಲಿರುತ್ತದೆ.<br><br>ನೂತನ ಜಿಲ್ಲಾ ಕ್ರೀಡಾಂಗಣ ನಿರ್ಮಾಣ ಕಾಮಗಾರಿಗೆ ಸಂಬಂಧಿಸಿದಂತೆ ಅನುದಾನದ ಲಭ್ಯತೆ ಆಧರಿಸಿ, ಹಂತ-ಹಂತವಾಗಿ ಕಾಮಗಾರಿ ಕೈಗೊಂಡು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ. |
| ಆ | ಬೆಳಗಾವಿ ಜಿಲ್ಲೆಯ ಯಲ್ಲೂರು ಗ್ರಾಮದ ಹತ್ತಿರ ಸುಮಾರು 66 ಎಕರೆ ಸರ್ಕಾರಿ ಭೂಮಿಯಲ್ಲಿ ಅತ್ಯಾಧುನಿಕ ಅಂತರ್ ರಾಷ್ಟ್ರೀಯ ಒಳಾಂಗಣ ಕ್ರೀಡಾಂಗಣ ನಿರ್ಮಿಸಲು ಸರ್ಕಾರದ ವತಿಯಿಂದ ಯೋಜಿಸಿದ್ದು ನಿಜವೇ; ಇದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ಮತ್ತು ಪೂರ್ಣಗೊಳಿಸಲಾಗುವುದು; | ಹೌದು<br><br>ಬೆಳಗಾವಿ ಜಿಲ್ಲೆಯ ಯಳ್ಳೂರು ಗ್ರಾಮದಲ್ಲಿ ಕ್ರೀಡಾಂಗಣವನ್ನು ನಿರ್ಮಿಸಲು ಪ್ರಸ್ತಾಪಿಸಿರುವ ನಿವೇಶನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರವಾಗಿರುವುದಿಲ್ಲ.<br><br>ಬೆಳಗಾವಿ ತಾಲ್ಲೂಕಿನ ಯಳ್ಳೂರು ಗ್ರಾಮದಲ್ಲಿ ಕ್ರೀಡಾ ಸಂಕೀರ್ಣ ನಿರ್ಮಿಸಲು ಜಿಲ್ಲಾಧಿಕಾರಿಗಳು, ಬೆಳಗಾವಿ ಇವರ ದಿನಾಂಕ:13-12-2022ರ ಆದೇಶದಲ್ಲಿ ಯಳ್ಳೂರು ಗ್ರಾಮದ ರಿ.ಸ. ನಂ:1142 ರಲ್ಲಿನ 66 ಎಕರೆ 17 ಗುಂಟೆ ಪೈಕಿ 40 ಎಕರೆ ಜಮೀನನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಮಂಜೂರು ಆದೇಶ ಹೊರಡಿಸಲಾಗಿದೆ. |

| | | |
|---|---|---|
| | | ಆದರೆ ಇದುವರೆಗೂ ಆದೇಶದಲ್ಲಿ ತಿಳಿಸಿರುವ ನಿವೇಶನದಲ್ಲಿ ಇರುವ ವಿವಿಧ ಉಪಯೋಗದ ಕಟ್ಟಡಗಳನ್ನು ಪರ್ಯಾಯ ಸ್ಥಳಕ್ಕೆ ಸ್ಥಳಾಂತರಗೊಳಿಸಿ ನಿವೇಶನವನ್ನು ಇಲಾಖೆಯ ವಶಕ್ಕೆ ಹಸ್ತಾಂತರ ಮಾಡಿರುವುದಿಲ್ಲ.<br><br>ಕಂದಾಯ ಇಲಾಖೆಯಿಂದ ನಿವೇಶನದ ಹದ್ದುಬಸ್ತು ಗುರುತಿಸಿದ ನಕ್ಷೆಯನ್ನು (boundary fixation sketch) ನೀಡಿರುವುದಿಲ್ಲ. ಇಲಾಖೆಗೆ ನಿವೇಶನ ಹಸ್ತಾಂತರವಾದ ನಂತರ ಅನುದಾನ ಲಭ್ಯತೆ ಆಧರಿಸಿ ಕಾಮಗಾರಿಯನ್ನು ಪ್ರಾರಂಭಿಸಲು ಪರಿಗಣಿಸಲಾಗುವುದು. |
| ಇ | ಬೆಳಗಾವಿ ನಗರದಲ್ಲಿ ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್ ವತಿಯಿಂದ ಈ ಹಿಂದೆ ಆಟೋ ನಗರ, ಕನ್ನಬರಗಿಯಲ್ಲಿ ಕ್ರಿಕೆಟ್ ಕ್ರೀಡಾಂಗಣವನ್ನು ನಿರ್ಮಿಸಿ ಬೆಳಗಾವಿ ಯುವಕರಿಗೆ ಕ್ರಿಕೆಟ್ ಕ್ರೀಡೆಯಲ್ಲಿ ಹೆಚ್ಚಿನ ಅವಕಾಶವನ್ನು ನೀಡಲು ಯೋಜಿಸಿದ್ದು, ಸದರಿ ಕ್ರೀಡಾಂಗಣದ ಪ್ರಸ್ತುತ ಹಂತವೇನು; | ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ವತಿಯಿಂದ ಕ್ರಿಕೆಟ್ ಕ್ರೀಡಾಂಗಣವನ್ನು ನಿರ್ಮಿಸಿದ್ದು, ಸದರಿ ಕ್ರಿಕೆಟ್ ಕ್ರೀಡಾಂಗಣವು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಸೇರಿರುವುದಿಲ್ಲ. |
| ಈ | ಈ ಜಿಲ್ಲೆಯ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುವುದು? (ಮಾಹಿತಿ ನೀಡುವುದು) | ನೂತನ ಜಿಲ್ಲಾ ಕ್ರೀಡಾಂಗಣ ನಿರ್ಮಾಣ ಕಾಮಗಾರಿಯನ್ನು ಅನುದಾನದ ಲಭ್ಯತೆ ಆಧರಿಸಿ ಲೋಕೋಪಯೋಗಿ ಇಲಾಖೆ ವತಿಯಿಂದ ಕೈಗೊಳ್ಳಲಾಗುತ್ತಿದೆ.<br><br>ಯಳ್ಳೂರು ಗ್ರಾಮದಲ್ಲಿ ಕ್ರೀಡಾ ಸಂಕೀರ್ಣ ನಿರ್ಮಿಸುವ ಸಂಬಂಧ, ನಿವೇಶನ ಇಲಾಖೆಗೆ ಹಸ್ತಾಂತರವಾದ ನಂತರ, ಅನುದಾನದ ಲಭ್ಯತೆ ಆಧರಿಸಿ, ಹಂತ-ಹಂತವಾಗಿ ಕಾಮಗಾರಿ ಕೈಗೊಂಡು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ. |

**ಸಂಖ್ಯೆ: ವೈಎಸ್‌ಡಿ-ಇಬಿಬಿ/98/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ